3

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾಲದ ಹೊರೆಯಿಂದ ಆತ್ಮಹತ್ಯೆ ಮಾಡಿಕೊಳ್ಳುವ ರೈತರಿಗೆ ನೀಡಲಾಗುತ್ತಿದ್ದ ಪರಿಹಾರ ಮೊತ್ತವನ್ನು ರೂ.2.00 ಲಕ್ಷ ಮೊತ್ತದಿಂದ ರೂ.5.00 ಲಕ್ಷಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ : 1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ/280/ಕೃಉಇ/2003, ಬೆಂಗಳೂರು, ದಿನಾಂಕ:18.07.2003.

2) ಸರ್ಕಾರದ ಆದೇಶ ಸಂಖ್ಯೆ: ಕೃಇ/57/ಕೃಉಇ/2015, ಬೆಂಗಳೂರು, ದಿನಾಂಕ:17.07.2015.

3) ಸರ್ಕಾರದ ಮುಖ್ಯಕಾರ್ಯದರ್ಶಿರವರ ಟಿಪ್ಪಣಿ ಸಂಖ್ಯೆ: ಮುಕಾ/678/15, ದಿನಾಂಕ:14-10-2015

**************

**ಪ್ರಸ್ತಾವನೆ:-**

ಬೆಳೆಹಾನಿ, ಸಾಲಭಾದೆ, ಬೆಲೆಕುಸಿತ ಇತ್ಯಾದಿ ಕಾರಣಗಳಿಂದ ಸಂಕಷ್ಟಕ್ಕೊಳಗಾದ ಹಲವಾರು ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದನ್ನು ಗಮನಿಸಿದ ರಾಜ್ಯ ಸರ್ಕಾರವು, ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ 2003-04ನೇ ಸಾಲಿನಿಂದ ಸಾಲದ ಹೊರೆಯಿಂದ ಆತ್ಮಹತ್ಯೆ ಮಾಡಿಕೊಂಡ ಪ್ರತಿಯೊಂದು ರೈತರ ಕುಟುಂಬಗಳಿಗೆ ತಲಾ 1.00 ಲಕ್ಷರೂ.ಗಳ (ರೂ. ಒಂದು ಲಕ್ಷ) ಪರಿಹಾರವನ್ನು ಒದಗಿಸಲು ಅವಕಾಶ ಕಲ್ಪಿಸಿರುತ್ತದೆ. ಆತ್ಮಹತ್ಯೆಗೆ ಸಾಲ ನೀಡುವ ಸಂಸ್ಥೆಗಳಿಂದ ಪಡೆದ ಸಾಲದ ಹೊರೆಯೇ ಸಂಭವನೀಯ ಕಾರಣವೆಂಬ ವಿಷಯವನ್ನು ದೃಢೀಕರಣ ಮಾಡಿಕೊಂಡು ಈ ಬಗ್ಗೆ ದೃಢೀಕರಣ ಪತ್ರ ನೀಡುವ ಬಗ್ಗೆ ಪ್ರತಿ ಉಪ ವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಲಾಗಿದ್ದು ಸದರಿ ಸಮಿತಿಯ ನಿರ್ಣಯದ ಆಧಾರದ ಮೇರೆಗೆ ಸಾಲದ ಬಾಧೆಯಿಂದ ಸಂಕಷ್ಟಕ್ಕೊಳಗಾಗಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ರಾಜ್ಯ ಸರ್ಕಾರದ ವತಿಯಿಂದ ತಲಾ 1.00ಲಕ್ಷ ರೂ. ಪರಿಹಾರವನ್ನು ನೀಡಲಾಗುತ್ತಿದ್ದು, ಸದರಿ ಪರಿಹಾರವನ್ನು ದಿನಾಂಕ:01-04-2015ರಿಂದ ಜಾರಿಗೆ ಬರುವಂತೆ ರೂ.1.00 ಲಕ್ಷದ ಬದಲಾಗಿ ರೂ.2.00ಲಕ್ಷ ನಗದು ನೀಡಲು ಮೇಲೆ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಅನುಮತಿ ನೀಡಲಾಗಿದೆ..

ಮಾನ್ಯ ಮುಖ್ಯಮಂತ್ರಿಗಳು ಹಾವೇರಿ ಜಿಲ್ಲೆಗೆ ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಭೇಟಿ ನೀಡಿದ ಸಂಧರ್ಭದಲ್ಲಿ ರೈತರಿಗೆ ಹೆಚ್ಚಿನ ಪರಿಹಾರ ನೀಡಲು ಅನುವಾಗುವಂತೆ ಆತ್ಮಹತ್ಯೆ ಮಾಡಿಕೊಂಡು ಮೃತರಾದ ರೈತರ ಕುಟುಂಬಗಳಿಗೆ ಪಾವತಿಸಬೇಕಾದ ಪರಿಹಾರ ಮೊತ್ತವನ್ನು ರೂ 2.00 ಲಕ್ಷಗಳಿಗೆ ಹೆಚ್ಚಿಸಲಾಗಿರುವುದನ್ನು ಮತ್ತೆ ರೂ 5.00 ಲಕ್ಷಕ್ಕೆ ಹೆಚ್ಚಿಸಲಾಗುವುದು. ಮುಂದುವರೆದು, ಹಲವಾರು ಕೃಷಿ ಕಾರ್ಮಿಕರು ರೈತರಿಂದ ಜಮೀನನ್ನು ಒಪ್ಪಂದದ ಮೇರೆಗೆ ಪಡೆದು ಕೃಷಿ ಉತ್ಪಾದನೆಯಲ್ಲಿ ತೊಡಗಿರುತ್ತಾರೆ. ಅಂತಹವರಿಗೂ ಸಹ ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ನೀಡುವ ಪರಿಹಾರವನ್ನು ವಿಸ್ತರಿಸಲಾಗುವುದು ಎಂದು ಘೋಷಿಸಿರುತ್ತಾರೆ. ಈ ಸಂಬಂಧ ಮೇಲೆ (3) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ರವರು ಸರ್ಕಾರಿ ಆದೇಶ ಹೊರಡಿಸಲು ಸೂಚನೆ ನೀಡಿರುತ್ತಾರೆ.

**ಸರ್ಕಾರಿ ಆದೇಶ ಸಂ. ಕೃಇ 57 ಕೃಉಇ 2015 (ಭಾ-1) ಬೆಂಗಳೂರು**
**ದಿನಾಂಕ 11-11-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸಾಲದ ಹೊರೆಯಿಂದ ರೈತರು ಆತ್ಮಹತ್ಯೆ ಮಾಡಿಕೊಂಡ ಸಂದರ್ಭದಲ್ಲಿ ಸಾಲ ನೀಡುವ ಸಂಸ್ಥೆಗಳಿಂದ ಪಡೆದ ಸಾಲದ ಹೊರೆಯೇ ಆತ್ಮಹತ್ಯೆಗೆ ಕಾರಣವೆಂಬ ವಿಷಯವನ್ನು ಜಾರಿಯಲ್ಲಿರುವ ಪ್ರತಿ ಉಪ ವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯ ಸಮಿತಿ ನಿರ್ಣಯಿಸಿ ದೃಢೀಕರಿಸುವುದು. ಆನಂತರ ಅಂತಹ ಪ್ರತಿ ರೈತ ಕುಟುಂಬಕ್ಕೆ ರೂ.2.00

ಲಕ್ಷದ (ರೂಪಾಯಿ ಎರಡು ಲಕ್ಷ) ಬದಲಾಗಿ ರೂ.5.00ಲಕ್ಷ (ರೂಪಾಯಿ ಐದು ಲಕ್ಷ) ನಗದು ಪರಿಹಾರವನ್ನು ದಿನಾಂಕ: 01-04-2015 ರಿಂದ ಜಾರಿಗೆ ಬರುವಂತೆ ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ. ಇದಕ್ಕೆ ತಗಲುವ ವೆಚ್ಚವನ್ನು ಪ್ರಸ್ತುತ ಚಾಲ್ತಿಯಲ್ಲಿರುವ ಲೆಕ್ಕಶೀರ್ಷಿಕೆ:2401-00-800-1-40 ಉಪಶೀರ್ಷಿಕೆ (100) ರಲ್ಲಿ ಭರಿಸಲು ಅನುಮತಿ ನೀಡಲಾಗಿದೆ.

ಮುಂದುವರೆದು, ಹಲವಾರು ಕೃಷಿ ಕಾರ್ಮಿಕರು ರೈತರಿಂದ ಜಮೀನನ್ನು ಒಪ್ಪಂದದ ಮೇರೆಗೆ ಪಡೆದು ಕೃಷಿ ಉತ್ಪಾದನೆಯಲ್ಲಿ ತೊಡಗಿರುತ್ತಾರೆ. ಅಂತಹವರಿಗೂ ಸಹ ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ನೀಡುವ ಪರಿಹಾರವನ್ನು ವಿಸ್ತರಿಸಿ ಆದೇಶಿಸಿದೆ.

ಈ ಆದೇಶವನ್ನು ದಿನಾಂಕ: 09.11.2015 ರ ಆರ್ಥಿಕ ಇಲಾಖೆ ಟಿಪ್ಪಣಿ ಸಂ: ಆಇ 701 ವೆಚ್ಚ-4/2015 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ರುದ್ರಪ್ಪ ಎಸ್.ಬಿ.),
ಸರ್ಕಾರದ ಉಪ ಕಾರ್ಯದರ್ಶಿ,
ಕೃಷಿ ಇಲಾಖೆ.
11/11/15

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು
7. ಕಂದಾಯ ಇಲಾಖೆಯ ಎಲ್ಲಾ ಉಪ ವಿಭಾಗಾಧಿಕಾರಿಗಳು
8. ಪೋಲೀಸ್ ಇಲಾಖೆಯ ಎಲ್ಲಾ ಡಿವೈಎಸ್ ಪಿ ಗಳು
9. ರಾಜ್ಯದ ಎಲ್ಲಾ ತಾಲ್ಲೂಕು ತಹಸೀಲ್ದಾರರುಗಳು
10. ರಾಜ್ಯದ ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳು ಹಾಗೂ ಎಲ್ಲಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳು
11. ಸಹಕಾರ ಸಂಘಗಳ ಎಲ್ಲಾ ಎ.ಆರ್.ಸಿ.ಎಸ್.ಗಳು
12. ಸರ್ಕಾರದ ಉಪ ಕಾರ್ಯದರ್ಶಿ -1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು.
15. ಡೆಪ್ಯೂಟಿ ಡೈರೆಕ್ಟರ್, TNMC, ಖನಿಜ ಭವನ, ಬೆಂಗಳೂರು.
16. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
17. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
18. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
(ಕ್ರ.ಸಂ 5 ರಿಂದ 11ರ ವರೆಗೆ ಕೃಷಿ ನಿರ್ದೇಶಕರ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ ಕಳುಹಿಸಿದೆ.**

1. ಪೋಲೀಸ್ ಮಹಾ ನಿರ್ದೇಶಕರು, ಬೆಂಗಳೂರು
2. ಸಹಕಾರ ಸಂಘಗಳ ರಿಜಿಸ್ಟ್ರಾರ್, ಬೆಂಗಳೂರು
3. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು
4. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು